(೨) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ಗೈರು ಹಾಜರಾಗಲು ಸಭೆಯ ಅನುಮತಿ ಬಗ್ಗೆ

ಅಧ್ಯಕ್ಷರು.—ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಅವರು ದಿನಾಂಕ ೨೦-೩-೧೯೮೭ ರಿಂದ ೩೧-೩-೧೯೮೭ರ ವರೆಗಿನ ಕರ್ನಾಟಕ ವಿಧಾನ ಸಭೆಯ ಉಪವೇಶನಗಳಿಗೆ ಗೈರು ಹಾಜರಾಗಲು ಅನುಮತಿಯನ್ನು ಕೋರಿ ಪತ್ರ ಬರೆದಿರುತ್ತಾರೆ. ಆದ್ದರಿಂದ ಸದರಿ ಮಾನ್ಯ ಸದಸ್ಯರಿಗೆ ಗೈರು ಹಾಜರಾಗಲು ಸಭೆ ಅನುಮತಿ ನೀಡಬಹುದೇ ?

(ಯಾವ ಸದಸ್ಯರೂ ವಿರೋಧ ವ್ಯಕ್ತಪಡಿಸಲಿಲ್ಲ)

ಅಧ್ಯಕ್ಷರು.— ಮಾನ್ಯ ಸದಸ್ಯರ ಗೈರು ಹಾಜರಿಗೆ ಅನುಮತಿಯನ್ನು ನೀಡಲಾಯಿತು.

(೩) ಶ್ರೀ ಚಂದ್ರಶೇಖರ್ ಅವರು ಗೈರು ಹಾಜರಾಗಲು ಸಭೆಯ ಅನುಮತಿ ಬಗ್ಗೆ

ಅಧ್ಯಕ್ಷರು.—ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಚಂದ್ರಶೇಖರ್ ಅವರು ಅನಾರೋಗ್ಯದ ಕಾರಣವಾಗಿ ದಿನಾಂಕ ೧೮-೩-೧೯೮೭ ರಿಂದ ೨೮-೩-೧೯೮೭ರ ವರೆಗೆ ವಿಧಾನ ಸಭಾ ಉಪವೇಶನಗಳಿಗೆ ಗೈರು ಹಾಜರಾಗಲು ಅನುಮತಿಯನ್ನು ಕೋರಿ ಪತ್ರ ಬರೆದಿರುತ್ತಾರೆ. ಆದ್ದರಿಂದ ಸದರಿ ಮಾನ್ಯ ಸದಸ್ಯರಿಗೆ ಗೈರು ಹಾಜರಾಗಲು ಸಭೆ ಅನುಮತಿ ನೀಡಬಹುದೇ ?

(ಯಾವ ಸದಸ್ಯರೂ ವಿರೋಧ ವ್ಯಕ್ತಪಡಿಸಲಿಲ್ಲ)

ಅಧ್ಯಕ್ಷರು.— ಮಾನ್ಯ ಸದಸ್ಯರ ಗೈರು ಹಾಜರಿಗೆ ಅನುಮತಿಯನ್ನು ನೀಡಲಾಯಿತು.

## ವಿತ್ತೀಯ ಕಾರ್ಯಕಲಾಪಗಳು

೧೯೮೭-೮೮ನೇ ಸಾಲಿನ ಮುಖ್ಯ ಮಂತ್ರಿಗಳ ಇಲಾಖೆ ಗೃಹ ಇಲಾಖೆ ರಸ್ತೆ ಸಾರಿಗೆ ಇಲಾಖೆಗಳ ಬೇಡಿಕೆಗಳ ಮೇಲಿನ ಚರ್ಚೆ ಮತ್ತು ಮುಂಜೂರಾತಿ

ಅಧ್ಯಕ್ಷರು.—ಈಗ ಮಾನ್ಯ ಮುಖ್ಯ ಮಂತ್ರಿಗಳವರಿಂದ ಪ್ರಸ್ತಾವನೆ ಮಂಡನೆ

ಶ್ರೀ ಎಂ. ಎಸ್. ಕೃಷ್ಣನ್.—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯ ಮಂತ್ರಿಗಳು ಪ್ರಸ್ತಾವನೆ ಮಂಡನೆ ಮಾಡುವುದಕ್ಕೆ ಮುಂಚೆ.....

ಅಧ್ಯಕ್ಷರು.—ಅವರು ಪ್ರಸ್ತಾವನೆ ಮಂಡನೆ ಮಾಡಲಿ. ಆಮೇಲೆ ತಾವು ಮಾತನಾಡಿ.

ಶ್ರೀ ಬಿ. ಎಸ್. ಯಡಿಯೂರಪ್ಪ.—ಅಲ್ಲ ಸ್ವಾಮಿ, ಇದೇನಿದು ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—

ಅಭಿನಂದನೆ ಕ್ರಮಾಂಕ-೧೧ ಯುವಜನ ಸೇವೆ

ಅಧ್ಯಕ್ಷರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯುವಜನ ಸೇವೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಡಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೦,೪೨,೩೩,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮುಂಜೂರು ಮಾಡಬೇಕೆಂದು ನಾನು ಭಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೨–ಕಲೆ, ಸಂಸ್ಕೃತಿ ಮಂತ್ರಿ ಕನ್ನಡಾಭಿವೃದ್ಧಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಲೆ ಸಂಸ್ಕೃತಿ ಮಂತ್ರಿ ಕನ್ನಡಾಭಿವೃದ್ಧಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ, ರಾಜಸ್ವ ಖಾತೆಯಲ್ಲಿ ೫,೮೯,೧೯,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೫–ವರಮಾನ ತೆರಿಗೆ, ವೃತ್ತಿಗಳು, ಮೂರಾಟ ಮತ್ತು ಇತರ ಸೇವೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವರಮಾನ ತೆರಿಗೆ, ವೃತ್ತಿಗಳು, ಮೂರಾಟ ಮತ್ತು ಇತರ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೩೪.೩೭,೪೯,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೬–ವಿಮೆ ಖಜಾನೆ ಮತ್ತು ಲೇಖಾ ಇಲಾಖೆಗಳ ಆಡಳಿತ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಿಮೆ, ಖಜಾನೆ ಮತ್ತು ಲೇಖಾ ಇಲಾಖೆಗಳ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೦,೫೮,೬೪,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೭–ವಿಶ್ರಾಂತಿ ವೇತನ ಮತ್ತು ಇತರ ನಿವೃತ್ತಿ ಸೌಲಭ್ಯಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಿಶ್ರಾಂತಿ ವೇತನ ಮತ್ತು ಇತರ ನಿವೃತ್ತಿ ಸೌಲಭ್ಯಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧,೩೩,೫೦,೦೦,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೮–ಸರಕಾರಿ ನೌಕರರಿಗೆ ಸಾಲಗಳು ಮತ್ತು ವಿವಿಧ ಸಾಲಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸರ್ಕಾರಿ ನೌಕರರಿಗೆ ಸಾಲಗಳು ಮತ್ತು ವಿವಿಧ ಸಾಲಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ಬಂಡವಾಳ ಖಾತೆಯಲ್ಲಿ ೧,೬೪,೦೦,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೨೦–ವಿವಿಧ ಸಾಮಾನ್ಯ ಸೇವೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಿವಿಧ ಸಾಮಾನ್ಯ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨,೩೭,೦೫,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೪,೫೦,೦೦,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ-೨೭ ವಾರ್ತಾ ಮತ್ತು ಪ್ರಚಾರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಾರ್ತಾ ಮತ್ತು ಪ್ರಚಾರಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೬,೯೫,೩೫,೦೦೦ ರೂ.ಗಳಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೪೨,೦೦,೮೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡ ಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೩೮-ಚುನಾವಣೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಚುನಾವಣೆಗಳಿಗೆ ಸಂದಾಯ ಮಾಡಂವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೯೪,೦೦,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೩೯-ರಾಜ್ಯಪಾಲರು, ಮಂತ್ರಿಗಳು ಮತ್ತು ಲೋಕಸೇವಾ ಆಯೋಗ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರಾಜ್ಯಪಾಲರು, ಮಂತ್ರಿಗಳು ಮತ್ತು ಲೋಕಸೇವಾ ಆಯೋಗಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೩೪,೦೨,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ-೪೦ ಸಚಿವಾಲಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಚಿವಾಲಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨,೮೦,೯೪,೦೦೦ ರೂ. ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೪೧-ಜಿಲ್ಲಾಡಳಿತ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಿಲ್ಲಾಡಳಿತಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸ ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೯,೫೮,೮೭,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೪೨-ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧,೨೭,೭೯,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

## ಅಭಿಯಾಚನೆ ಕ್ರಮಾಂಕ–25 ಪೊಲೀಸ್ ಮಂತ್ರಿ ಅಗ್ನಿಶಾಮಕ ಸೇವೆ

**ಶ್ರೀ ಬಿ. ರಾಚಯ್ಯ** (ಗೃಹ ಸಚಿವರು).––ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪೊಲೀಸ್ ಮತ್ತು ಅಗ್ನಿಶಾಮಕ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಬರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧೩,೩೮,೬೯,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೫,೮೦,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

**ಶ್ರೀ ಎಂ. ಎಸ್. ಕೃಷ್ಣನ್.**––ಬೇಡಿಕೆಗಳನ್ನು ಮಂಡನೆ ಮಾಡುವುದಕ್ಕೆ ಅವಕಾಶ ಕೊಡುವ ಹಾಗೆ ಇಲ್ಲ, ನೀವು ಅವಕಾಶ ಕೊಟ್ಟರೆ ಏನು ಪ್ರಯೋಜನ ಬಂದಹಾಗೆ ಆಯಿತು ?

**ಶ್ರೀ ಬಿ ಎಸ್. ಯಡಿಯೂರಪ್ಪ.**––ಐದಾರು ದಿವಸಗಳಿಂದ ಈ ಸಭೆಯ ಕಾರ್ಯಕಲಾಪಗಳು ಇದೇರೀತಿ ನಡೆದಿವೆ. ದಯಮಾಡಿ ಇದಕ್ಕೆ ಅವಕಾಶ ಕೊಡಬೇಡಿ, ಮೊದಲು ಈ ಸಮಸ್ಯೆಯನ್ನು ಬಗೆಹರಿಸಿ.

**ಅಧ್ಯಕ್ಷರು.**––ಪ್ರಸ್ತಾವನೆಗಳನ್ನು ಮಂಡನೆ ಮಾಡಲಿ, ಆಮೇಲೆ ತಾವು ಮಾತನಾಡಲಿಕ್ಕೆ ಅವಕಾಶ ಕೊಡುತ್ತೇನೆ.

## ಅಭಿಯಾಚನೆ ಕ್ರಮಾಂಕ ೧೯ ಸಣ್ಣ ಉಳಿತಾಯಗಳು

**ಶ್ರೀ ಎ. ಲಕ್ಷ್ಮೀಸಾಗರ್** (ಕಾನೂನು ಸಂಸದೀಯ ವ್ಯವಹಾರಗಳು, ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ನಗರಾಭಿವೃದ್ಧಿ ಮಂತ್ರಿಗಳು).––ಮಾನ್ಯ ಅಧ್ಯಕ್ಷರೆ, ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂದೀಖಾನೆ ರಾಜ್ಯಮಂತ್ರಿಗಳ ಪರವಾಗಿ ಬೇಡಿಕೆಗಳನ್ನು ಮಂಡನೆ ಮಾಡುತ್ತೇನೆ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಣ್ಣ ಉಳಿತಾಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೨,೫೫,೦೦,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

## ಅಭಿಯಾಚನೆ ಕ್ರಮಾಂಕ–೨೫ ವಾಹನ ತೆರಿಗೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಾಹನ ತೆರಿಗೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೫,೧೭,೦೬,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

## ಅಭಿಯಾಚನೆ ಕ್ರಮಾಂಕ–೨೬ ಜೈಲುಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜೈಲುಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೬,೨೦,೨೮,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೫,೦೦,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

## ಅಭಿಯಾಚನೆ ಕ್ರಮಾಂಕ–೨೮ ರಸ್ತೆ ಸಾರಿಗೆ

**ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರಸ್ತೆ ಸಾರಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೧,೨೫,೪೫,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧೫,೦೭,೦೦,೦೦೦ ರೂಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.**

**ಅಧ್ಯಕ್ಷರು.**—ಬೇಕೆಗಳನ್ನು ಮಂಡನೆ ಮಾಡಲಾಯಿತು.

## ಧರಣಿ ಸತ್ಯಾಗ್ರಹವನ್ನು ಹಿಂತೆಗೆದುಕೊಳ್ಳಲು ಮನವಿ

**ಶ್ರೀ ಬಿ. ಎಸ್. ಯಡಿಯೂರಪ್ಪ.**— ವಿರೋಧಪಕ್ಷದ ಸದಸ್ಯರನ್ನು ಇಲ್ಲಿ ಬಿಟ್ಟು ಈ ತರಹ ಮಾಡುವುದು ಸರಿಯಾದುದಲ್ಲ.

**ಶ್ರೀ ಎಂ. ಎಸ್. ಕೃಷ್ಣನ್.**— ನಿನ್ನೆಯ ದಿವಸ ನಾನು, ಮಾನ್ಯ ವೆಂಕಟರಾವಣಯ್ಯನವರು ಯಡಿಯೂರಪ್ಪನವರು ಅಲ್ಲಿ ಕುಳಿತುಕೊಂಡು ಮಾತನಾಡಿದಾಗ, ಆ ಸಂದರ್ಭದಲ್ಲಿ ಬಂದಂತಹ ಇಂಡಿಕೇಷನ್, ಇವತ್ತು ಈ ವ್ಯವಹಾರವನ್ನು ಮುಗಿಸೋಣ ಸಭೆಯ ಭಾವಿಯಲ್ಲಿರುವವರನ್ನು ಮೇಲಕ್ಕೆ ತರಲಿಕ್ಕೆ ಪ್ರಯತ್ನ ಮಾಡೋಣವೆಂದು ತಿಳಿಸಲಾಗಿತ್ತು. ಮೊನ್ನೆ ದಿವಸ ಮಾನ್ಯ ಬೊಮ್ಮಾಯಿಯವರು ದೇವೇಗೌಡರು ಎಲ್ಲರೂ ಸಹ ಮಾನ್ಯ ಮುಖ್ಯಮಂತ್ರಿಗಳು ಬರುತ್ತಾರೆ ತಿರ್ಮಾನ ಮಾಡೋಣ ವೆಂದು ಹೇಳಿದ್ದಾರೆ. ನಿನ್ನೆ ಮೊನ್ನೆ ಇದರಬಗ್ಗೆ ಒಂದು ತೀರ್ಮಾನ ಮಾಡಿ ಎಂದು ನಾವು ಆನೇಕ ಸಲಹೆಗಳನ್ನು ಕೊಟ್ಟಿದ್ದೇವೆ. ನಾವು ಕೊಟ್ಟಂತಹ ಸಲಹೆಗಳನ್ನು ದುರದೃಷ್ಟವಶಾತ್ ಆ ಕಡೆಯವರು ಒಪ್ಪಿಕೊಳ್ಳಲಿಲ್ಲ. ಲ್ಲಿವರು ಒಪ್ಪದೇ ಇರುವುದರಿಂದ ನಾವು ಕೊಟ್ಟಂತಹ ಸಲಹೆಗಳು ಬಿದ್ದುಹೋಗಿವೆ. ಸೋಮವಾರ ಮುಖ್ಯ ಮಂತ್ರಿಗಳು ಬರುತ್ತಾರೆ ಖಂಡಿತಾ ಇತ್ಯರ್ಥ ಮಾಡುತ್ತೇವೆಂದು ಮೊನ್ನೆ ದಿವಸ ಹೇಳಿದ್ದಾರೆ. ಆದರೆ ಇವತ್ತು ಅದಕ್ಕೆ ತದ್ವಿರುದ್ಧವಾಗಿ ನಡೆದಿದೆ. ಮುಖ್ಯಮಂತ್ರಿಗಳು ಬಂದಮೇಲೆ ನೀವು ಯೋಚನೆ ಮಾಡಿ ಪ್ರಶ್ನೆಯನ್ನು ಇತ್ಯರ್ಥ ಮಾಡಿ ಎಂದು ಹೇಳಿದರೆ, ಇವತ್ತಿನ ದಿವಸ ಚರ್ಚೆ ಮಾಡಿದಾಗ ಪರಿಸ್ಥಿತಿ ಬಿಗಡಾಯಿಸುವ ಹಂತಕ್ಕೆ ಹೋಗಿದೆ. ಒಂದು ತರಹ ಮನೋಭಾನುವಾರದಿಂದ ಆ ಕಡೆಯವರು ಈ ಕಡೆಯವರು ಇಬ್ಬರೂ ಪಟ್ಟುಹಿಡಿದು ಕುಳಿತಿದ್ದಾರೆ. ಇವರು ಇಷ್ಟೊಂದು ಹೆಜ್ಜೆ ಮುಂದಕ್ಕೆ ಹೋಗಿದ್ದಾರೆ. ಮಾನ್ಯ ಆಡ್ಯಂತಾಯವರು ಮತ್ತು ಉ ರಬ್ಬರವರ ಹೇಳಿಕೆಗಳು ಪತ್ರಿಕೆಗಳಲ್ಲಿ ಬಂದಿವೆ. ಅವರು ಬರೆದುಕೊಟ್ಟರೆ ಮಾತ್ರ ಆಗಬಹುದೆಂದು ವ ವರು ಹೇಳುತ್ತಿದ್ದಾರೆ. ಈಗ ಒಂದು ರೀತಿಯ ಹೊಸ ಹೊಸ ಸೂಚನೆಗಳು ಬಂದಿವೆ. ಮೊನ್ನೆಯಿನತನಕ ಬೇರೆ ಸೂಚನೆಗಳು ಇದ್ದವು ನಾನು ಎಲ್ಲವನ್ನು ಹೇಳುವುದಕ್ಕೆ ಹೋಗುವುದಿಲ್ಲ. ಸೂಚನೆಗಳ ನ್ನು ಯಾರೇ ಒಪ್ಪಿಕೊಳ್ಳಲಿ ಬಿಡಲಿ, ಮುಖ್ಯವಾಗಿ ನಾನು ಯಡಿಯೂರಪ್ಪನವರು, ವೆಂಕಟರಾಮಯ್ಯನವರು ಪ್ರಯತ್ನಪಟ್ಟಿದ್ದೇವೆ. ಈಗ ಒಂದು ನಾರ್ಮಲ್‌ನಿಗೆ ಬರಲಿ. ಮಿಕ್ಕ ವಿಷಯಗಳನ್ನು ಆ ಮೇಲೆ ಚರ್ಚೆಮಾಡೋಣ. ನಾವು ಪ್ರಾಮಾಣಿಕವಾಗಿ ಪ್ರಯತ್ನಪಟ್ಟಿದ್ದೇವೆ. ಹೆಚ್ಚು ಜವಾಬ್ದಾರಿ ಆಳಂವವರಿಗೆ ಇದೆ. ವಿರೋಧ ಪಕ್ಷದವರಿಗೆ ಕೂಡ ಜವಾಬ್ದಾರಿ ಇದೆ. ಮುಖ್ಯವಾಗಿ ವಿರೋಧ ಪಕ್ಷದವರು ಇವತ್ತಿನ ದಿವಸ ಪರಿಸ್ಥಿತಿ ಇನ್ನಷ್ಟು ಬಿಗಡಾಯಿಸುವ ಹಾಗೆ ಮಾಡಿದ್ದಾರೆ. ಇದು ನನ್ನ ಸ್ವಂತ ಅಭಿಪ್ರಾಯ.

ನಿನ್ನೆಯ ದಿವಸ ಶ್ರೀಆಡ್ಯಂತಾಯ ಮತ್ತು ಶ್ರೀಉಮರಬ್ಬನವರು ಸ್ಟೇಟ್‌ಮೆಂಟ್ ಕೊಟ್ಟಿದ್ದಾರೆ.ಅದೂ ಪತ್ರಿಕೆಗಳಲ್ಲಿ ಬಂದಿದೆ. ನಾನು ಸಹ ಓದಿದ್ದೇನೆ ಓದಿದಮೇಲೆ ನನಗೆ ಏನು ಅನಿಸಿತು ಎಂದರೆ ಆಗಿರುವ ಪರಿಸ್ಥಿತಿಗೆ ಇನ್ನೂ ಹೆಚ್ಚಿನ ತೊಂದರೆ,ಕ್ಲಿಷ್ಟತೆ ಬರುವುದಕ್ಕೆ ಸಾಧ್ಯವಾಗುತ್ತದೆಯೇ ಹೊರತು ಇದರಿಂದ ಸಮಸ್ಯೆಯನ್ನು ಬಗೆಹರಿಸುವುದಕ್ಕೆ ಆ ದಾರಿಯಲ್ಲಿ ಹೋಗುವುದಕ್ಕೆ ಆಗುವುದಿಲ್ಲ. ಮಾನ್ಯ ಬೊಮ್ಮಾಯಿಯವರು ಹುಬ್ಬಳ್ಳಿಯಲ್ಲೂ ಸ್ಟೇಟ್‌ಮೆಂಟ್ ಕೊಟ್ಟರು.ಶ್ರೀ ದೇವೆಗೌಡರು ಹಾಸನದಲ್ಲಿ ಸ್ಟೇಟ್‌ಮೆಂಟ್ ಕೊಟ್ಟರು, ಆದರ ತಿರುಳು ಏನೇ ಇರಬಹುದು. ಶ್ರೀ ಉಮರಬ್ಬ, ಆಡ್ಯಂತಾಯ ಹೇಳಿದ್ದಕ್ಕಿಂತ